# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಗುಂಡ್ಲುಪೇಟೆ

## ಸಿ.ಸಿ. ಸಂಖ್ಯೆ: 1041/2022

ಫ್ರಾಸಾ – 6

ಚಾಸಾ – 6

**ಸಾಕ್ಷಿಯು ದಿಃ 15.12.2025 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

| | | |
|---|---|---|
| ಹೆಸರು | : | ಬಸವ |
| ತಂದೆಯ ಹೆಸರು | : | ಕರಿಯ |
| ವಯಸ್ಸು | : | 40 ವರ್ಷ |
| ವೃತ್ತಿ | : | ಕೂಲಿ ಕೆಲಸ |
| ವಾಸಸ್ಥಳ | : | ಚೆನ್ನಿಕಟ್ಟೆ |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :-**

ಚಾಸಾ 1 ಮತ್ತು 5 ಗೊತ್ತು. ನನಗೆ ಓದು ಬರಹ ಬರುವುದಿಲ್ಲ. ಸಾಕ್ಷಿಯು ನಿಪಿ 2 ಸ್ಥಳ ಪಂಚನಾಮೆಯಲ್ಲಿ ತನ್ನ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಹೆಬ್ಬೆಟ್ಟಿನ ಗುರುತನ್ನು ಯಾವಾಗ ಎಲ್ಲಿ ಮಾಡಿದ್ದೇನೆ ಎಂದು ನನಗೆ ಗೊತ್ತಿಲ್ಲ. ನಿಪಿ 2 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಮಾಡಿಲ್ಲ ಮತ್ತು ನ್ಯಾಯಾಲಯದ ಮುಂದೆ ಇರುವ ದೊಣ್ಣೆ ಮತ್ತು ಕಲ್ಲನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು , ಅನುಮತಿ ನೀಡಲಾಗಿದೆ)

**ಪಾಟೀ ಸವಾಲು :- ಮಾನ್ಯ ಎಪಿಪಿಯವರಿಂದ :-**

ದಿಃ 05.09.2022 ರಂದು ಚಾಸಾ 1 ತೋರಿಸಿದ ಸ್ಥಳದಲ್ಲಿ ಚಾಸಾ 5 ಮತ್ತು ನನ್ನ ಸಮಕ್ಷಮ ಪೊಲೀಸರು ನಿಪಿ 2 ರಂತೆ ಪಂಚನಾಮೆ ಜರುಗಿಸಿ ಸ್ಥಳದಲ್ಲಿ ದೊಣ್ಣೆ ಮತ್ತು ಕಲ್ಲನ್ನು ಅಮಾನತ್ತು ಪಡಿಸಿಕೊಂಡು ನಮ್ಮ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿಪಿ 2 ರ ವಿಚಾರಗಳು ಗೊತ್ತಿದ್ದರು ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ